**National**
**Kannada**
**26.01.2025 / 13.10 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ನವದೆಹಲಿಯ ಕರ್ತವ್ಯ ಪಥದಲ್ಲಿ ಸಂಭ್ರಮದ ಗಣರಾಜ್ಯೋತ್ಸವ ಆಚರಣೆ; ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಗೌರವ ರಕ್ಷೆ ಸ್ವೀಕಾರ

೨. ಗಣ್ಯರಾಜ್ಯೋತ್ಸವದ ಮೆರವಣಿಗೆಯಲ್ಲಿ ದೇಶದ ಶ್ರೀಮಂತ ಸಂಸ್ಕೃತಿಯ ಹಾಗೂ ಪರಂಪರೆಯ ಅನಾವರಣ; ಆಗಸದಲ್ಲಿ ಯುದ್ಧ ವಿಮಾನಗಳಿಂದ ಆಕರ್ಷಕ ಸಾಹಸ ಪ್ರದರ್ಶನ

೩. ಕರ್ನಾಟಕದಲ್ಲಿ ಗಣರಾಜ್ಯೋತ್ಸವ ಆಚರಣೆ; ರಾಜ್ಯಪಾಲರಿಂದ ರಾಜ್ಯ ಸರ್ಕಾರದ ಜನೋಪಯೋಗಿ ಯೋಜನೆಗಳ ಅನಾವರಣ

೪. ಹತ್ತೊಂಬತ್ತು ವರ್ಷದೊಳಗಿನವರ ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್; ಬಾಂಗ್ಲಾದೇಶ ವಿರುದ್ಧ ಟಾಸ್ ಗೆದ್ದ ಭಾರತ ಫೀಲ್ಡಿಂಗ್ ಆಯ್ಕೆ

<><*<><>*><>

ದೇಶಾದ್ಯಂತ ೭೬ನೇ ಗಣರಾಜ್ಯೋತ್ಸವದ ಸಂಭ್ರಮ ಮನೆಮಾಡಿದೆ. ನವದೆಹಲಿಯ ಕರ್ತವ್ಯಪಥದಲ್ಲಿಂದು ರಾಷ್ಟ್ರಪತಿ ದ್ರೌಪದಿ ಮುರ್ಮು ನೇತೃತ್ವದಲ್ಲಿ ಗಣತಂತ್ರ ದಿವಸದ ಸಂಭ್ರಮಾಚರಣೆ ಕಳೆಗಟ್ಟಿತು. ಇಂದು ಬೆಳಗ್ಗೆ ಕರ್ತವ್ಯ ಪಥಕ್ಕೆ ರಾಷ್ಟ್ರಪತಿಗಳೊಂದಿಗೆ ಇಂಡೋನೇಷಿಯಾ ಅಧ್ಯಕ್ಷ ಪ್ರಬೋವೊ ಸುಬಿಯಾಂತೊ ಆಗಮಿಸಿದರು. ಬಳಿಕ ರಾಷ್ಟ್ರಪತಿ, ಸಶಸ್ತ್ರಪಡೆ, ಪ್ಯಾರಾಮಿಲಿಟರಿ ಪಡೆ ಸೇರಿದಂತೆ ವಿವಿಧ ಪಡೆಗಳಿಂದ ಗೌರವ ರಕ್ಷೆ ಸ್ವೀಕರಿಸಿದರು. ಪ್ರಧಾನಿ ನರೇಂದ್ರ ಮೋದಿ ರಾಷ್ಟ್ರೀಯ ಯುದ್ಧ ಸ್ಮಾರಕಕ್ಕೆ ಪುಷ್ಪನಮನ ಸಲ್ಲಿಸಿದ ನಂತರ ಗಣರಾಜ್ಯೋತ್ಸವ ಪರೇಡ್‌ಗೆ ಚಾಲನೆ ದೊರೆಯಿತು. ದೇಶದ ವಿವಿಧ ಭಾಗಗಳ ಸಂಗೀತ ವಾದ್ಯಗಳೊಂದಿಗೆ 'ಸಾರೇ ಜಹಾಸೆ ಅಚ್ಛಾ' ನುಡಿಸುತ್ತಾ ೩೦೦ ಸಾಂಸ್ಕೃತಿ ಕಲಾವಿದರು ಮೆರವಣಿಗೆಗೆ ಚಾಲನೆ ನೀಡಿದರು.

ಪರೇಡ್ ಮೆರುಗು

ಈ ಬಾರಿಯ ಗಣರಾಜ್ಯೋತ್ಸವದ ಪಥಸಂಚಲನದ ಪರೇಡ್ ಕಮಾಂಡರ್ ಲೆಫ್ಟಿನೆಂಟ್ ಜನರಲ್ ಭವನೀಶ್ ಕುಮಾರ್ ನೇತೃತ್ವದಲ್ಲಿ ಕರ್ತವ್ಯ ಪಥದಲ್ಲಿ ಆರಂಭಗೊಂಡ ಪಥಸಂಚಲನದಲ್ಲಿ ಭೂಸೇನೆ, ವಾಯುಸೇನೆ, ನೌಕಾಸೇನೆ, ಗಡಿರಕ್ಷಣಾ ಪಡೆ, ಅರೆ ಸೇನಾಪಡೆ ಸೇರಿದಂತೆ ವಿವಿಧ ಸೇನಾಪಡೆಗಳು ಪಾಲ್ಗೊಂಡು ದೇಶದ ಶಕ್ತಿ-ಸಾಮರ್ಥ್ಯವನ್ನು ಅನಾವರಣಗೊಳಿಸಿದವು. ಪಥಸಂಚಲನದಲ್ಲಿ ಟ್ಯಾಂಕ್ ಟಿ-೯೦- ಭೀಷ್ಮ, ನಾಗ ಕ್ಷಿಪಣಿ ವ್ಯವಸ್ಥೆ, ಬ್ರಹ್ಮೋಸ್, ಪಿನಾಕ ಮಲ್ಟಿ ಲಾಂಚರ್ ರಾಕೆಟ್ ಸಿಸ್ಟಮ್ ಸೇರಿದಂತೆ ಡಿಆರ್‌ಡಿಒ ದ ಪ್ರಳಯ್ ವೆಪನ್ ಸಿಸ್ಟಮ್ ಗಮನ ಸೆಳೆಯಿತು. ಇದೇ

ವೇಳೆ ಇಂಡೋನೇಷಿಯಾದ ೧೬೦ ಯೋಧರ ತುಕಡಿ ಮತ್ತು ೧೯೦ ಸದಸ್ಯರ ಬ್ಯಾಂಡ್ ತುಕಡಿ ಗಣರಾಜ್ಯೋತ್ಸವ ಪಥಸಂಚಲನದಲ್ಲಿ ಭಾಗವಹಿಸಿದವು. ವಿವಿಧ ಪಡೆಗಳ ಪಥಸಂಚಲನದ ಬಳಿಕ ಸುವರ್ಣಭಾರತ; ಪರಂಪರೆ ಮತ್ತು ವಿಕಾಸ ಎಂಬ ಧ್ಯೇಯವಾಕ್ಯದೊಂದಿಗೆ ಸ್ತಬ್ಧಚಿತ್ರಗಳ ಮೆರವಣಿಗೆ ಆರಂಭವಾಯಿತು. ಮೆರವಣಿಗೆಯಲ್ಲಿ ಮೊದಲಿಗೆ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯ ಸ್ತಬ್ಧಚಿತ್ರ, ಬಳಿಕ ವಿವಿಧ ಕೇಂದ್ರ ಸರ್ಕಾರದ ಸಚಿವಾಲಯಗಳು, ಕೇಂದ್ರಾಡಳಿತ ಪ್ರದೇಶಗಳು ಮತ್ತು ಆಯ್ದ ರಾಜ್ಯಗಳ ಸ್ತಬ್ಧಚಿತ್ರಗಳು ನೆರೆದಿದ್ದ ಎಲ್ಲರ ಗಮನ ಸೆಳೆದವು. ಕರ್ನಾಟಕದಿಂದ ವಿಶೇಷವಾಗಿ 'ಲಕ್ಕುಂಡಿ ಶಿಲ್ಪಕಲೆಯ ತೊಟ್ಟಿಲು ಸ್ತಬ್ಧ ಚಿತ್ರ ಅನಾವರಣಗೊಂಡಿತು. ಆಂಧ್ರಪ್ರದೇಶ ಎಟಿಕೊಪ್ಪಕ ಮರದ ಆಟಿಕೆಗಳು, ಪಂಜಾಬ್‌ನಿಂದ ಶ್ರೀಮಂತ ಕರಕುಶಲ ಕಲೆ, ಉತ್ತರಪ್ರದೇಶದಿಂದ ಮಹಾಕುಂಭಮೇಳ, ಮಧ್ಯಪ್ರದೇಶದಿಂದ ಚಿರತೆಗಳ ಕುರಿತ ಸ್ತಬ್ಧಚಿತ್ರ ಸೇರಿದಂತೆ ಹಲವು ರಾಜ್ಯಗಳು ತಮ್ಮ ತಮ್ಮ ರಾಜ್ಯಗಳ ವೈಶಿಷ್ಟ್ಯತೆಯನ್ನು ಪತಿಬಿಂಬಿಸುವ ವಿಷಯಗಳ ಕುರಿತ ಸ್ತಬ್ಧಚಿತ್ರಗಳನ್ನು ಅನಾವರಣಗೊಳಿಲಾಯಿತು. ೫ ಜಾಗ್ವರ್ ವಿಮಾನಗಳಿಂದ ಆಗಸದಲ್ಲಿ ಬಾಣದ ಆಕೃತಿ ರಚನೆ, ೨೨ ಯುದ್ಧ ವಿಮಾನಗಳು, ೭ ಸೇನಾ ಹೆಲಿಕಾಪ್ಟರ್‌ಗಳಿಂದ ಸಾಹಸ ಪ್ರದರ್ಶನ, ೩ ಸುಖೋಯ್-೩೦ ಜೆಟ್‌ಗಳಿಂದ ತ್ರಿಶೂಲ ಆಕಾರದ ಪ್ರದರ್ಶನ, ೨೦೦ ಕಿಲೋಮೀಟರ್ ವೇಗದಲ್ಲಿ ೬ ರಫೆಲ್ ವಿಮಾನಗಳಿಂದ ವಜ್ರಾಂಗ ಆಕೃತಿ ಪ್ರದರ್ಶನ ಪ್ರಮುಖವಾಗಿ ಗಮನ ಸೆಳೆಯಿತು. ದೇಶದ ಸೇನಾಬಲವನ್ನು ಪ್ರದರ್ಶಿಸಿದ ಪಥಸಂಚಲನ ಮತ್ತು ಸಾಂಸ್ಕೃತಿ ಪರಂಪರೆ ಮತ್ತು ವೈವಿಧ್ಯತೆಯನ್ನು ಸಾರಿದ ಸ್ತಬ್ಧಚಿತ್ರಗಳ ಮೆರವಣಿಗೆ ಮನಮೋಹಕವಾಗಿತ್ತು.

<><*<><>*><>

೨೦೨೫ ರ ೧೩೯ ಪದ್ಮ ಪ್ರಶಸ್ತಿಗಳನ್ನು ನೀಡಲು ರಾಷ್ಟ್ರಪತಿ ದ್ರೌಪದಿ ಮುರ್ಮು ಅನುಮೋದನೆ ನೀಡಿದ್ದಾರೆ. ದೇಶದ ಅತ್ಯುನ್ನತ ನಾಗರಿಕ ಗೌರವಗಳಲ್ಲಿ ಒಂದಾದ ಈ ಪ್ರಶಸ್ತಿಗಳನ್ನು ಪದ್ಮವಿಭೂಷಣ, ಪದ್ಮಭೂಷಣ ಮತ್ತು ಪದ್ಮಶ್ರೀ ಎಂಬ ಮೂರು ವಿಭಾಗಗಳಲ್ಲಿ ನೀಡಲಾಗುತ್ತದೆ. ಅಸಾಧಾರಣ ಮತ್ತು ವಿಶಿಷ್ಟ ಸೇವೆಗಾಗಿ ಪದ್ಮವಿಭೂಷಣ, ಉನ್ನತ ಶ್ರೇಣಿಯ ವಿಶಿಷ್ಟ ಸೇವೆಗಾಗಿ 'ಪದ್ಮಭೂಷಣ' ಮತ್ತು ಯಾವುದೇ ಕ್ಷೇತ್ರದಲ್ಲಿ ವಿಶಿಷ್ಟ ಸೇವೆಗಾಗಿ 'ಪದ್ಮಶ್ರೀ' ಪ್ರಶಸ್ತಿ ನೀಡಲಾಗಿದೆ. ೨೦೨೫ ರ ವರ್ಷಕ್ಕೆ, ರಾಷ್ಟ್ರಪತಿಗಳು ೧೩೯ ಪದ್ಮ ಪ್ರಶಸ್ತಿಗಳನ್ನು ಅನುಮೋದಿಸಿದ್ದಾರೆ. ಈ ಪಟ್ಟಿಯಲ್ಲಿ ೭ ಪದ್ಮವಿಭೂಷಣ, ೧೯ ಪದ್ಮಭೂಷಣ ಮತ್ತು ೧೧೩ ಪದ್ಮಶ್ರೀ ಪ್ರಶಸ್ತಿಗಳು ಸೇರಿವೆ. ಇದರಲ್ಲಿ ಒಟ್ಟು ೧೩ ಪ್ರಶಸ್ತಿಗಳನ್ನು ಮರಣೋತ್ತರವಾಗಿ ನೀಡಲಾಗುತ್ತಿದೆ. ಪ್ರಶಸ್ತಿ ಪುರಸ್ಕೃತರಲ್ಲಿ ೨೩ ಮಹಿಳೆಯರು ಮತ್ತು ೧೦ ವಿದೇಶಿಯರು ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವಿದೇಶಿಗರು ಸೇರಿದ್ದಾರೆ. ಕಲೆ, ಸಾಮಾಜಿಕ ಕಾರ್ಯ, ಸಾರ್ವಜನಿಕ ವ್ಯವಹಾರಗಳು, ವಿಜ್ಞಾನ ಮತ್ತು ಎಂಜಿನಿಯರಿಂಗ್, ವ್ಯಾಪಾರ ಮತ್ತು ಕೈಗಾರಿಕೆ, ವೈದ್ಯಕೀಯ, ಸಾಹಿತ್ಯ ಮತ್ತು ಶಿಕ್ಷಣ, ಕ್ರೀಡೆ, ನಾಗರಿಕ ಸೇವೆ ಮುಂತಾದ ವಿವಿಧ ವಿಭಾಗಗಳಲ್ಲಿ ಪ್ರಶಸ್ತಿಗಳನ್ನು ನೀಡಲಾಗುತ್ತದೆ. ಭಾರತೀಯ ಬರಹಗಾರ ಎಂ.ಟಿ. ವಾಸುದೇವನ್ ನಾಯರ್, ಸುಜುಕಿ ಮೋಟಾರ್ ಕಾರ್ಪೊರೇಷನ್‌ನ ಮಾಜಿ ಅಧ್ಯಕ್ಷ ಒಸಾಮು ಸುಜುಕಿ ಮತ್ತು ಗಾಯಕಿ ಶಾರದಾ ಸಿನ್ಹಾ ಅವರಿಗೆ ಮರಣೋತ್ತರವಾಗಿ ಪದ್ಮವಿಭೂಷಣ ಪ್ರಶಸ್ತಿ ನೀಡಲಾಗಿದೆ. ಗಾಯಕ ಪಂಕಜ್ ಉದಾಸ್ ಅವರಿಗೆ ಮರಣೋತ್ತರವಾಗಿ ಪದ್ಮಭೂಷಣ ಪ್ರಶಸ್ತಿ ನೀಡಲಾಗಿದೆ. ಈ ಬಾರಿಯ ಪದ್ಮಪ್ರಶಸ್ತಿಗಳಿಗೆ ಕರ್ನಾಟಕದ ೯ ಸಾಧಕರನ್ನು ಆಯ್ಕೆ ಮಾಡಲಾಗಿದೆ. ವಯೋಲಿನ್ ವಾದಕ ಎಲ್.ಸುಬ್ರಮಣ್ಯಂ ಅವರು ಪದ್ಮವಿಭೂಷಣಕ್ಕೆ ಭಾಜನರಾಗಿದ್ದರೆ, ಕನ್ನಡದ ಚಲನಚಿತ್ರ ರಂಗದ ಹಿರಿಯ ನಟ ಅನಂತನಾಗ್ ಪದ್ಮಭೂಷಣ

ಪ್ರಶಸ್ತಿಗೆ ಪಾತ್ರರಾಗಿದ್ದಾರೆ. ಅವರೊಂದಿಗೆ ಸಾಹಿತ್ಯ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಪ್ರಸಾರ ಭಾರತಿ ಮಾಜಿ ಅಧ್ಯಕ್ಷ ಎ.ಸೂರ್ಯಪ್ರಕಾಶ್ ಅವರು ಈ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಎಂದಿನಂತೆ ಈ ಬಾರಿಯೂ ಪದ್ಮಪ್ರಶಸ್ತಿಗಳಿಗಾಗಿ ಕೇಂದ್ರ ಸರ್ಕಾರ ತೆರೆಮರೆಯ ಸಾಧಕರನ್ನು ಆಯ್ಕೆ ಮಾಡಿದ್ದು, ಕಲೆಯ ಕ್ಷೇತ್ರದಲ್ಲಿ ತೊಗಲು ಗೊಂಬೆಯಾಟ ಕಲಾವಿದರಾದ ಭೀಮವ್ವ ದೊಡ್ಡಬಾಳಪ್ಪ ಶಿಳ್ಳೆಕ್ಯಾತಾರ, ಚಲನಚಿತ್ರ ನಿರ್ಮಾಪಕ ಹಾಸನ ರಘು, ವ್ಯಾಪಾರ ಮತ್ತು ಕೈಗಾರಿಕಾ ಕ್ಷೇತ್ರದಲ್ಲಿ ಪ್ರಶಾಂತ್ ಪ್ರಕಾಶ್, ಸಂಗೀತ ಕ್ಷೇತ್ರದಲ್ಲಿ ರಿಕ್ಕಿಕೇಜ್, ಜಾನಪದ ಕಲೆಗಾಗಿ ವೆಂಕಪ್ಪ ಅಂಬಾಜಿ ಸುಗಟೇಕಾರ್, ವೈದ್ಯಕೀಯ ಕ್ಷೇತ್ರದಲ್ಲಿ ಡಾ.ವಿಜಯಲಕ್ಷ್ಮೀ ದೇಶಮಾನೆ ಕರ್ನಾಟಕದಿಂದ ಆಯ್ಕೆಯಾಗಿದ್ದಾರೆ. ಕೊಪ್ಪಳ ತಾಲೂಕಿನ ಮೋರನಾಳ ಗ್ರಾಮದ ತೊಗಲು ಗೊಂಬೆ ಕಲಾವಿದೆ ಭೀಮವ್ವ, ತಾಮ್ಮನ್ನು ಪದ್ಮಶ್ರೀ ಪ್ರಶಸ್ತಿಗೆ ಆಯ್ಕೆ ಮಾಡಿರುವ ಕುರಿತು ಒಂದು ಜಾನಪದ ಗೀತೆ ಹಾಡುವ ಮೂಲಕ ಆಕಾಶವಾಣಿಯೊಂದಿಗೆ ಸಂತಸ ಹಂಚಿಕೊಂಡಿದ್ದಾರೆ.

ಧ್ವನಿ: ಭೀಮವ್ವ, ಪದ್ಮಶ್ರೀ ಪುರಸ್ಕೃತೆ

<><*<><>*><>

ಸಂವಿಧಾನದ ಆಶಯಗಳು ಉದಾತ್ತ ಶ್ರೀಮಂತ ಪರಂಪರೆಯನ್ನು ನೆನಪಿಸುತ್ತವೆ. ಅಲ್ಲದೇ, ಪ್ರತಿಯೊಬ್ಬರೂ ಹೊರಬೇಕಾದ ಜವಾಬ್ದಾರಿಗಳನ್ನು ಸಹ ಅದು ನೆನಪಿಸುತ್ತದೆ ಎಂದು ಕರ್ನಾಟಕ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದ್ದಾರೆ. ಬೆಂಗಳೂರಿನ ಫೀಲ್ಡ್ ಮಾರ್ಷಲ್ ಮಾಣಿಕ್ ಷಾ ಕವಾಯತು ಮೈದಾನದಲ್ಲಿ ಇಂದು ನಡೆದ ಗಣರಾಜ್ಯೋತ್ಸವದಲ್ಲಿ ಧ್ವಜ ಅನಾವರಣಗೊಳಿಸಿ, ಭದ್ರತಾ ಪಡೆಗಳಿಂದ ಗೌರವ ರಕ್ಷೆ ಸ್ವೀಕರಿಸಿ ಅವರು ಮಾತನಾಡಿದರು. ಕರ್ನಾಟಕದಲ್ಲಿ ಮಹಿಳೆಯರ ಆರ್ಥಿಕ ಸಬಲೀಕರಣಕ್ಕಾಗಿ ಜಾರಿಗೆ ತರಲಾದ 'ಗೃಹಲಕ್ಷ್ಮಿ' ಯೋಜನೆಯಡಿ, ಪ್ರತಿ ಕುಟುಂಬದ ಒಬ್ಬ ಗೃಹಿಣಿಗೆ ಮಾಸಿಕ ೨ ಸಾವಿರ ರೂಪಾಯಿ ಆರ್ಥಿಕ ನೆರವು ನೀಡಲಾಗುತ್ತಿದೆ ಎಂದರು. 'ಗೃಹ ಜ್ಯೋತಿ' ಯೋಜನೆಯಡಿ, ಪ್ರಸ್ತುತ ೧ ಕೋಟಿ ೬೨ ಲಕ್ಷ ಗ್ರಾಹಕರು ಪ್ರಯೋಜನ ಪಡೆಯುತ್ತಿದ್ದಾರೆ. 'ಶಕ್ತಿ' ಯೋಜನೆಯಡಿ, ಮಹಿಳೆಯರಿಗೆ ಉಚಿತ ಪ್ರಯಾಣವನ್ನು ಒದಗಿಸಲಾಗುತ್ತಿದೆ. ಇದು ಮಹಿಳಾ ಸಬಲೀಕರಣವನ್ನು ಬಲಪಡಿಸುವತ್ತ ಸರ್ಕಾರದ ಒಂದು ಮಹತ್ವದ ಹೆಜ್ಜೆಯಾಗಿದೆ ಎಂದು ರಾಜ್ಯಪಾಲರು ಹೇಳಿದರು. ಪ್ರಸಕ್ತ ಸಾಲಿನಲ್ಲಿ, ೨೦೨೪ರ ಏಪ್ರಿಲ್‌ನಿಂದ ಸೆಪ್ಟೆಂಬರ್ ವರೆಗೆ ೮೮ ಸಾವಿರದ ೮೫೩ ದಶಲಕ್ಷ ಅಮೆರಿಕನ್ ಡಾಲರ್ ಮೌಲ್ಯದಷ್ಟು ರಫ್ತು ಮಾಡುವ ಮೂಲಕ ರಾಜ್ಯವು ಒಟ್ಟಾರೆ ರಫ್ತಿನಲ್ಲಿ ಪ್ರಥಮ ಸ್ಥಾನದಲ್ಲಿದೆ ಎಂದರು.

ಧ್ವನಿ: ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್

ಇತ್ತೀಚಿನ ದಿನಗಳಲ್ಲಿ ಸೈಬರ್ ದಾಳಿಯು ಅಘಾತಕಾರಿ ವಿಷಯವಾಗಿದೆ. ಅಪರಾಧಿಗಳನ್ನು ಪತ್ತೆಹಚ್ಚಲು ಮತ್ತು ಶಿಕ್ಷಿಸಲು ತಂತ್ರಜ್ಞಾನದ ಪರಿಣಾಮಕಾರಿ ಬಳಕೆ ಮಾಡುವುದು ಹಾಗೂ ಜನರಲ್ಲಿ ಜಾಗೃತಿ ಮೂಡಿಸುವುದು ಪ್ರಮುಖ ಹೆಜ್ಜೆಯಾಗಿದೆ. ಈ ನಿಟ್ಟಿನಲ್ಲಿ ಸರ್ಕಾರವು ಎಲ್ಲಾ ಹಂತಗಳಲ್ಲಿ ತರಬೇತಿ ಮತ್ತು ಅಗತ್ಯ ತಂತ್ರಜ್ಞಾನವನ್ನು ಒದಗಿಸುತ್ತಿದೆ ಎಂದರು. ಒಲಿಂಪಿಕ್ಸ್, ಪ್ಯಾರಾಲಿಂಪಿಕ್ಸ್, ಏಷ್ಯನ್ ಗೇಮ್ಸ್, ಪ್ಯಾರಾ ಏಷ್ಯನ್ ಗೇಮ್ಸ್ ಮತ್ತು ಕಾಮನ್‌ವೆಲ್ತ್ ಗೇಮ್ಸ್‌ನಲ್ಲಿ ಪದಕ ಗೆದ್ದರಾಜ್ಯದ ೧೨ ಕ್ರೀಡಾಪಟುಗಳಿಗೆ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ನೇರ ನೇಮಕಾತಿ ಪತ್ರಗಳನ್ನು ನೀಡಲಾಗಿದೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದರು.

<><*<><>*><>

೨೦೨೫ರ ಗಣರಾಜ್ಯೋತ್ಸವದ ಮುನ್ನ ದಿನವಾದ ನಿನ್ನೆ ರಾಷ್ಟ್ರಪತಿ ದ್ರೌಪದಿ ಮುರ್ಮು, ೯೩ ಸಶಸ್ತ್ರ ಪಡೆ ಮತ್ತು ಕೇಂದ್ರ ಸಶಸ್ತ್ರ ಪೊಲೀಸ್ ಪಡೆಯ ಸಿಬ್ಬಂದಿಗೆ ಶೌರ್ಯ ಪ್ರಶಸ್ತಿಗಳನ್ನು ಅನುಮೋದಿಸಿದ್ದಾರೆ. ಇದರಲ್ಲಿ ೨ ಕೀರ್ತಿ ಚಕ್ರ, ೧೪ ಶೌರ್ಯಚಕ್ರ, ೧ ಬಾರ್ ಟು ಸೇನಾ ಪದಕ, ೪೪ ಸೇನಾಪದಕ, ೨ ನಾವ್ ಸೇನಾ ಪದಕ ಮತ್ತು ೮ ವಾಯುಸೇನಾ ಪದಕಗಳಿಗೆ ಅನುಮೋದನೆ ನೀಡಲಾಗಿದೆ. ಇದರಲ್ಲಿ ೧೧ ಪ್ರಶಸ್ತಿಗಳನ್ನು ಮರಣೋತ್ತರವಾಗಿ ನೀಡಲಾಗುತ್ತಿದೆ.

<><*<><>*><>

ಕೌಲಾಲಂಪುರದ ಬಯುಮಾಸ್ ಓವಲ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ೧೯ ವರ್ಷದೊಳಗಿನವರ ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಸೂಪರ್ ಆರು ಹಂತದ ಆರನೇ ಪಂದ್ಯದಲ್ಲಿಂದು ಭಾರತ ಹಾಗೂ ಬಾಂಗ್ಲಾದೇಶ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಭಾರತ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ. ಮಳೆಯಿಂದಾಗಿ ಟಾಸ್ ನಡೆಸಲು ವಿಳಂಭವಾಯಿತು. ಇತ್ತೀಚಿನ ವರದಿಯಂತೆ ಬಾಂಗ್ಲಾದೇಶ, ೭.೨ ಓವರ್‌ಗಳಿಗೆ ೩ ವಿಕೆಟ್ ನಷ್ಟಕ್ಕೆ ೧೮ ರನ್ ಮಾಡಿ ಆಡುತ್ತಿದೆ. ಸೂಪರ್ ಆರು ಹಂತದಲ್ಲಿ ಆಡಿರುವ ಎರಡೂ ಪಂದ್ಯಗಳಲ್ಲಿ ಜಯಸಾಧಿಸಿರುವ ಭಾರತ, ೪ ಅಂಕಗಳೊಂದಿಗೆ ಅಂಕಪಟ್ಟಿಯಲ್ಲಿ ೨ನೇ ಸ್ಥಾನದಲ್ಲಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>